**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–40)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 08)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 08)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಬನವಾಸಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018(2018ರ ಕರ್ನಾಟಕ ಅಧಿನಿಯಮ ಸಂ. 08)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018ರ

## (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 08) ಉದ್ಧೃತ ಭಾಗ

**XXX XXX XXX**

**3. ಪ್ರಾಧಿಕಾರದ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ, ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗೆ ಸಂಬಂಧಿಸಿದಂತೆ ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿಯಲ್ಲಿ ಪ್ರಾಧಿಕಾರವು ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಹಾಗೂ ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿ – ಅಧ್ಯಕ್ಷ

(ಬಿ) ಉತ್ತರ ಕನ್ನಡ ಜಿಲ್ಲೆಯ ಉಸ್ತುವಾರಿ ಮಂತ್ರಿ – ಉಪಾಧ್ಯಕ್ಷ

(ಸಿ) ಕಂದಾಯ ಇಲಾಖೆಯ ಪ್ರಭಾರ ಹೊಂದಿರುವ ಮಂತ್ರಿ - ಪದನಿಮಿತ್ತ ಸದಸ್ಯ

(ಡಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರ ಹೊಂದಿರುವ ಮಂತ್ರಿ - ಪದನಿಮಿತ್ತ ಸದಸ್ಯ

(ಇ) ಬನವಾಸಿ ಪ್ರದೇಶವನ್ನು ಭಾಗಶಃವಾಗಿ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಲೋಕಸಭಾ ಸದಸ್ಯರು ಮತ್ತು ಕರ್ನಾಟಕ ವಿಧಾನಸಭಾ ಸದಸ್ಯರು - ಸದಸ್ಯ

(ಎಫ್) ಬನವಾಸಿಯಲ್ಲಿ ನೋಂದಾಯಿತ ಮತದಾರರಾಗಿರುವ ರಾಜ್ಯಸಭೆಯ ಮತ್ತು ಕರ್ನಾಟಕ ವಿಧಾನಸಭೆಯ (ಸ್ಥಳೀಯ) ಸದಸ್ಯ - ಸದಸ್ಯ

(ಜಿ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ - ಪದನಿಮಿತ್ತ ಸದಸ್ಯ

(ಎಚ್) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ - ಪದನಿಮಿತ್ತ ಸದಸ್ಯ

(ಐ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ - ಪದನಿಮಿತ್ತ ಸದಸ್ಯ

(ಜೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ - ಪದನಿಮಿತ್ತ ಸದಸ್ಯ

(ಕೆ) ಜಿಲ್ಲಾಧಿಕಾರಿ, ಉತ್ತರ ಕನ್ನಡ, ಕಾರವಾರ - ಪದನಿಮಿತ್ತ ಸದಸ್ಯ

(ಎಲ್) ಪ್ರಾಧಿಕಾರದ ಆಯುಕ್ತ - ಸದಸ್ಯ ಕಾರ್ಯದರ್ಶಿ

(ಎಂ) ರಾಜ್ಯ ಸರ್ಕಾರವು ನಾಮನಿರ್ದೇಶನ ಮಾಡಬೇಕಾದ ಬನವಾಸಿಯ ಇತಿಹಾಸ ಮತ್ತು ಪರಂಪರೆಯಲ್ಲಿ ತಜ್ಞರಾದ ಇಬ್ಬರು ಸರ್ಕಾರೇತರ ಸದಸ್ಯರು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025